| | |
|---|---|
| | Application for corrected marks card |
| | Application for Corrected certificate |

ಮೇಲೆ ಪಟ್ಟಿ ಮಾಡಿರುವ, ಎಲ್ಲಾ ಸೇವಾಸಿಂಧು ಸೇವೆಗಳನ್ನು ಎಲ್ಲಾ ಪಾಲಿಟೆಕ್ನಿಕಗಳು, ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಕಛೇರಿಗಳಲ್ಲಿ, ಈ ಕೂಡಲೆ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಲು ತಾಂತ್ರಿಕ ಶಿಕ್ಷಣ ಇಲಾಖೆಗೆ ಈ ಮೂಲಕ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ಎಲ್.ಸುಬ್ರಮಣ್ಯ)
ಉಪ ಕಾರ್ಯದರ್ಶಿಗಳು(ವಿಶ್ವವಿದ್ಯಾಲಯ)
ಉನ್ನತ ಶಿಕ್ಷಣ ಇಲಾಖೆ

ಪ್ರತಿಯನ್ನು:-

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.
2. ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕರ್ನಾಟಕ ಸರ್ಕಾರ.
3. ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಇ-ಆಡಳಿತ, ಕರ್ನಾಟಕ ಸರ್ಕಾರ.
4. ನಿರ್ದೇಶಕರು, ಸಕಾಲ ಮಿಷಿನ್, ಕರ್ನಾಟಕ ಸರ್ಕಾರ.
5. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.
7. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/163/ಇಸಿಎಸ್(3)/2018

ಕಾರ್ಯದರ್ಶಿಯವರ ಕಛೇರಿ
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ: 11.03.2019.

**<u>ಹಿಂಬರಹ</u>**

ಸಕಾಲ ಸೇವೆಗಳಲ್ಲಿ ಮ್ಯಾನ್ಯುಯಲ್ ಆಗಿ ಅರ್ಜಿ ಸ್ವೀಕರಿಸುವುದನ್ನು ನಿಲ್ಲಿಸಿ, ಅರ್ಜಿ ಸ್ವೀಕೃತಿಗೆ ಆನ್‌ಲೈನ್ ತಂತ್ರಾಂಶದ (ಸೇವಾ ಸಿಂಧು) ಬಳಕೆಯನ್ನು ಕಡ್ಡಾಯ ಮಾಡುವ ಬಗ್ಗೆ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ: ಇಡಿ 11 ಇಜಿಓವಿ 2019, ಬೆಂಗಳೂರು, ದಿನಾಂಕ: 07.03.2019 ನ್ನು ರಾಜ್ಯದ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳ ಮಾಹಿತಿಗಾಗಿ ತರಲಾಗಿದೆ ಮತ್ತು ಮುಂದೆ ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ : ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ - ಮಾಹಿತಿಗಾಗಿ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ.



ಪ್ರತಿ :

1. ಇ-ಆಡಳಿತ - ಅಂತರ್ಜಾಲದಲ್ಲಿ ಪ್ರಕಟಿಸಲು.
2. ನಿರ್ದೇಶಕರ ಆಪ್ತಶಾಖೆ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
3. ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
4. ಕಾರ್ಯದರ್ಶಿಯವರ ಆಪ್ತಶಾಖೆ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
5. ತಾಂತ್ರಿಕ ಪರೀಕಾ ಮಂಡಳಿಯ ಎಲ್ಲಾ ಅಧಿಕಾರಿಗಳು/ಸಿಬ್ಬಂದಿ ವರ್ಗದವರ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ.

## ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯ: ಸಕಾಲ ಸೇವೆಗಳಲ್ಲಿ ಮ್ಯಾನ್ಯುಯಲ್ ಆಗಿ ಅರ್ಜಿ ಸ್ವೀಕರಿಸುವುದನ್ನು ನಿಲ್ಲಿಸಿ, ಅರ್ಜಿ ಸ್ವೀಕೃತಿಗೆ ಆನ್‌ಲೈನ್ ತಂತ್ರಾಂಶದ(ಸೇವಾ ಸಿಂದು) ಬಳಕೆಯನ್ನು ಕಡ್ಡಾಯ ಮಾಡುವ ಬಗ್ಗೆ.

ಓದಲಾಗಿದೆ: (1) ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011 ಮತ್ತು (ತಿದ್ದುಪಡಿ) ಅಧಿನಿಯಮ, 2014.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011 ಮತ್ತು (ತಿದ್ದುಪಡಿ) ಅಧಿನಿಯಮ, 2014 ಗಳ ಅನುಸೂಚಿಯಲ್ಲಿ, ಕಾಲೇಜು ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಇಲಾಖೆ ಮತ್ತು ವಿಶ್ವವಿದ್ಯಾಲಯಗಳ 18 ನಾಗರೀಕ ಸೇವೆಗಳನ್ನು ಕರ್ನಾಟಕ ಸಕಾಲ ಸೇವೆಗಳಡಿಯಲ್ಲಿ ಗುರುತಿಸಲಾಗಿದೆ.

ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:26-12-2018 ರಂದು ನಡೆದ ಇಲಾಖೆ ಕಾರ್ಯದರ್ಶಿಗಳ ಸಭೆಯಲ್ಲಿ ಸಕಾಲ ಯೋಜನೆಯ ಅನುಷ್ಠಾನದ ಕುರಿತು ಚರ್ಚಿಸಲಾಯಿತು. ಸಕಾಲ ಯೋಜನೆಯಡಿ ಅಧಿಸೂಚಿಸಲಾಗಿರುವ ಸೇವೆಗಳನ್ನು ಮತ್ತಷ್ಟು ನಾಗರೀಕ ಸ್ನೇಹಿಯನ್ನಾಗಿಸಲು ಮತ್ತು ಸಕಾಲದಡಿ ಅಧಿಸೂಚಿಸಲಾಗಿರುವ ಸೇವೆಗಳಿಗೆ ನಾಗರೀಕರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಕಾಶವನ್ನು ಕಲ್ಪಿಸುವ ನಿಟ್ಟಿನಲ್ಲಿ ಇಲಾಖೆಗಳು ಕಾರ್ಯಪ್ರವೃತ್ತರಾಗಬೇಕೆಂದು ಮುಖ್ಯ ಕಾರ್ಯದರ್ಶಿಗಳು ಸೂಚಿಸಿರುತ್ತಾರೆ.

ಸೇವಾ ಸಿಂಧು ಯೋಜನೆಯಡಿ ಉನ್ನತ ಶಿಕ್ಷಣ ಇಲಖೆಯ ಸೇವೆಗಳನ್ನು ಗುರುತಿಸಿ, ಅವುಗಳಿಗೆ ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿಗೊಳಿಸಲಾಗಿರುತ್ತದೆ. ಸದರಿ ಆನ್‌ಲೈನ್ ತಂತ್ರಾಂಶದ ಬಳಕೆಯನ್ನು ಕಡ್ಡಾಯ ಮಾಡುವುದರಿಂದ ಸಕಾಲ ಅಧಿನಿಯಮದ ದತ್ತಾಂಶವನ್ನು ಬೈಪಾಸ್ ಮಾಡುವುದನ್ನು ತಡೆಗಟ್ಟಬಹುದು ಎಂದು ಸೂಚಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಈಗಾಗಲೇ ಅಭಿವೃದ್ಧಿ ಪಡಿಸಲಾಗಿರುವ ಆನ್‌ಲೈನ್ ತಂತ್ರಾಂಶವನ್ನು ಬಳಸಿಕೊಂಡು ನೀಡಬಹುದಾದ ಸೇವೆಗಳಿಗೆ, ಮ್ಯಾನ್ಯುಯಲ್ ಆಗಿ ಅರ್ಜಿ ಸ್ವೀಕರಿಸಿರುವುದನ್ನು ನಿಲ್ಲಿಸುವ ಮತ್ತು ಅರ್ಜಿ ಸ್ವೀಕೃತಿಗೆ ಆನ್‌ಲೈನ್ ತಂತ್ರಾಂಶದ ಬಳಕೆಯನ್ನು ಕಡ್ಡಾಯ ಮಾಡಲು ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರಿ ಆದೇಶ ಸಂಖ್ಯೆ:ಇಡಿ11ಇಜಿಒವಿ2019, ಬೆಂಗಳೂರು, ದಿನಾಂಕ:07.03.2019

ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಇಲಾಖೆಗಳು ಮತ್ತು ವಿಶ್ವವಿದ್ಯಾಲಯಗಳು, ಕರ್ನಾಟಕ ಸಕಾಲ ಸೇವೆಗಳ ಮುಖಾಂತರ ನಾಗರೀಕ ಸೇವೆಗಳನ್ನು, ಈಗಾಗಲೇ ಅಭಿವೃದ್ಧಿ ಪಡಿಸಲಾಗಿರುವ ಆನ್‌ಲೈನ್ ತಂತ್ರಾಂಶವನ್ನು ಬಳಸಿಕೊಂಡು ನೀಡಬಹುದಾದ ಸೇವೆಗಳಿಗೆ, ಅರ್ಜಿ ಸ್ವೀಕೃತಿಗೆ ಆನ್‌ಲೈನ್ ತಂತ್ರಾಂಶದ (ಸೇವಾಸಿಂಧು) ಬಳಕೆಯನ್ನು ಕಡ್ಡಾಯಗೊಳಿಸಲಾಗಿದೆ ಮತ್ತು ಮ್ಯಾನುವಲ್ ಆಗಿ ಅರ್ಜಿ ಸ್ವೀಕರಿಸಿರುವುದನ್ನು ಕೂಡಲೇ ನಿಲ್ಲಿಸಲಾಗಿದೆ.

ಈ ಸಂಬಂಧ ಇ- ಆಡಳಿತ ಇಲಾಖೆಯು ಈ ಕೆಳಕಂಡ ಆನ್‌ಲೈನ್ ಸೇವೆಗಳನ್ನು ಸಾರ್ವಜನಿಕರ ಉಪಯೋಗಕ್ಕೆ www.sakala.kar.nic.in ಜಾಲತಾಣದಲ್ಲಿ ಪ್ರಕಟ ಪಡಿಸಿರುತ್ತದೆ.

| | |
|---|---|
| Department of Technical Education | Application for Original Diploma Certificate |
| | Application for Photocopy of answer script |
| | Application for Revaluation of answer script |
| | Application for Duplicate Diploma certificate |
| | Application for Duplicate Diploma Marks card |
| | Application for Syllabus certification |
| | Application for Verification of marks card/certificate |
| | Application for Migration certificate |